# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 493 |
| ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ |
| ಉತ್ತರಿಸುವ ದಿನಾಂಕ | : | 13.12.2018 |
| ಉತ್ತರಿಸುವ ಸಚಿವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಇಲಾಖೆಯಲ್ಲಿ (ಸಿ.ಡಿ.ಪಿ.ಓ) ಶಿಶು ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗ ಮೂಲಕ ದಿನಾಂಕ:17.12.2016ರಂದು ಅಧಿಸೂಚನೆ ಹೊರಡಿಸಲಾಗಿದ್ದು, ಎಲ್ಲಾ ಪ್ರಕ್ರಿಯೆಗಳು ಪೂರ್ಣಗೊಂಡಿದ್ದರೂ ಸಹ ಈವರೆವಿಗೂ ನೇಮಕಾತಿ ಆದೇಶ ಹೊರಡಿಸದಿರಲು ಕಾರಣವೇನು; | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ 52 ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ:17.12.2016 ರಂದು ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚನೆ ಹೊರಡಿಸಿದ್ದು, ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಲೋಕಸೇವಾ ಆಯೋಗವು ಆಯ್ಕೆ ಪ್ರಕ್ರಿಯೆಯನ್ನು ಅಂತಿಮಗೊಳಿಸಿ ದಿನಾಂಕ:29.11.2018ರಂದು ಅಂತಿಮ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಿದೆ. ಸಿಂಧುತ್ವ ಪ್ರಮಾಣ ಪತ್ರ ಹಾಗೂ ಪೋಲೀಸ್ ತಪಾಸಣಾ ವರದಿಗಳನ್ನು ನಿರೀಕ್ಷಿಸಲಾಗಿದೆ. |
| ಆ | ಈ ಬಗ್ಗೆ ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ? | ಅಭ್ಯರ್ಥಿಗಳ ಜಾತಿ ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲೀಸ್ ತಪಾಸಣಾ ವರದಿ ಪಡೆಯಲು ಸಂಬಂಧಿಸಿದ ಜಿಲ್ಲಾಧಿಕಾರಿಗಳು ಮತ್ತು ಪೋಲೀಸ್ ಅಧೀಕ್ಷಕರು/ ಆಯುಕ್ತರುಗಳಿಗೆ ದಿನಾಂಕ:03.12.2018ರಂದು ಕೋರಲಾಗಿದೆ. ಸಿಂಧುತ್ವ ಪ್ರಮಾಣ ಪತ್ರ ಮತ್ತು ಪೋಲೀಸ್ ತಪಾಸಣಾ ವರದಿಗಳನ್ನು ಸ್ವೀಕರಿಸಿದ ನಂತರ ನೇಮಕಾತಿ ಆದೇಶ ಹೊರಡಿಸಲು ಕ್ರಮಕೈಗೊಳ್ಳಲಾಗುವುದು. |

ಸಂಖ್ಯೆ: ಮಮಇ 380 ಎಸ್‌ಜೆಡಿ 2018

(ಡಾ: ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು.